**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 123/2016**

ಚಾಸಾಃ 8 ಪ್ರಾಸಾಃ6

| | | |
|---|---|---|
| ಹೆಸರು | : | ರಾಮಕೃಷ್ಣಯ್ಯ |
| ಗಂಡನ/ತಂದೆಯ ಹೆಸರು | : | ಲೇಟ್ ಮೂಡಲಗಿರಿಯಯ್ಯ |
| ವಯಸ್ಸು | : | 64ವರ್ಷ |
| ಉದ್ಯೋಗ | : | ನಿವೃತ ಎಎಸ್ಐ |
| ವಾಸ | : | ಚನ್ನಪಟ್ಟಣ ಟೌನ್ |

**ದಿನಾಂಕ 06.01.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ**

ನಾನು 08.06.2011 ರಿಂದ 04.02.2018 ರವರೆಗೆ ಎಂ ಕೆ ದೊಡ್ಡಿ ಪೊಲೀಸ್ ಠಾಣೆಯಲ್ಲಿ ಮುಖ್ಯಪೇದೆ ಆಗಿ ನಂತರ ಎ ಎಸ್ ಐ ಆಗಿ ಮುಂಬಡ್ತಿ ಹೊಂದಿ ಎಂ.ಕೆ ದೊಡ್ಡಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 12.02.2016 ರಂದು ರಾತ್ರಿ 11.15 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರದಲ್ಲಿದ್ದಾಗ ಪಿರ್ಯಾದಿದಾರರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಮೊಕದ್ದಮ್ಮೆ ಸಂಖ್ಯೆ 16/2016 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಪ್ರಥಮ ವರ್ತಮಾನ ವರದಿಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಮುಂದುವರೆದ ತನಿಖೆಯನ್ನು ನಾನೇ ಮುಂದುವರೆಸಿ ದಿಃ13.02.2016 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ1 ರವರನ್ನು ಸ್ಥಳ ತೋರಿಸುವಂತೆ ತಿಳಿಸಿದ್ದು, ಪಂಚರಾದ ಚಾಸಾ-5 ಮತ್ತು 6 ರವರಿಗೆ ಪಂಚರಾಗಿ ಬರಮಾಡಿಕೊಂಡು ಚಾಸಾ1 ರವರು ತೋರಿಸಿದ ಘಟನಾ ಸ್ಥಳದಲ್ಲಿ ಚಾಸಾ5 ಮತ್ತು 6 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ. ಆ ಸಮಯದಲ್ಲಿ 2 ಇಟ್ಟಿಗೆ ಚೂರುಗಳನ್ನು ಅಮಾನತ್ತು ಪಡಿಸಿರುತ್ತೇನೆ. ಠಾಣಾ ಮಾಲುಪಟ್ಟಿ ಸಂಖ್ಯೆ 7/2016 ರಂತೆ ನಮೂದಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ಸ್ಥಳ ಮಹಜರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದೆ ಇರುವ ಮು ಮಾ 1 ಅನ್ನು ನೋಡಿ ಸಾಕ್ಷಿಯು ಗುರುತಿಸುತ್ತಾರೆ. ಅದೇ ದಿನ ಮಹಜರ್ ಮತ್ತು ಪ್ರತ್ಯಕ್ಷ ಸಾಕ್ಷಿದಾರರಾದ ತಿಮ್ಮರಾಜು ಚಾಸಾ-5 ರವರ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಆರೋಪಿಯ ಪತ್ತೆಗಾಗಿ ಗ್ರಾಮದಲ್ಲಿ ವಿಚಾರ ಮಾಡಲಾಗಿ ಆರೋಪಿತರು ಪತ್ತೆಯಾಗದ ಕಾರಣ ಅದೇ ದಿನ ಚಾಸಾ9 ರವರಿಗೆ ಮುಂದುವರೆದ ತನಿಖೆಗಾಗಿ ಕಡತವನ್ನು ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್ ಕೆ ಆರ್ ವಕೀಲರಿಂದಃ**

ಘಟನಾ ಸ್ಥಳದಿಂದ ನಮ್ಮ ಠಾಣೆಗೆ ದೂರ 2-3 ಕಿ. ಮೀ ಅಂತರವಾಗುತ್ತದೆ ಎಂದರೆ ನಿಜ. ತಡವಾಗಿ ದೂರು ನೀಡಿದ ಬಗ್ಗೆ ವಿವರಣೆ ಕೇಳಿಲ್ಲ. ಪಂಚರಿಗೆ ನೋಟೀಸ್ ನೀಡಿರುತ್ತೇನೆ. ಮು ಮಾ 1 ಅನ್ನು ಘಟನಾ ಸ್ಥಳದಲ್ಲಿ ಜಪ್ತು ಮಾಡಿಲ್ಲ ಎಂದರೆ ಸುಳ್ಳು. ಮು ಮಾ 1 ಅನ್ನು ಪ್ರಕರಣದ ಅನುಕೂಲತೆಗಾಗಿ ಸೃಷ್ಟಿ ಮಾಡಿರುತ್ತೇನೆಂದರೆ ಸುಳ್ಳು. ಮುದ್ದೆ ಮಾಲಿನ ಮೇಲೆ ಪಂಚದಾರರ ಸಹಿ ಪಡೆದಿಲ ಎಂದರೆ ನಿಜ. ದೂರುದಾರರಿಗೆ ಸಹಾಯವಾಗಲೀ ಎಂದು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ಸಲ್ಲಿಸಿರುತ್ತೇನೆಂದರೆ ಸುಳ್ಳು. ನಾನು ಹೇಳಿದಂತೆ ಯಾವುದೇ ಸ್ಥಳಕ್ಕೆ ಹೋಗಿಲ್ಲ, ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ಮಹಜರನ್ನು ಠಾಣೆಯಲ್ಲಿ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ವಿರುದ್ದ ನಮ್ಮ ಠಾಣಾ ಅಂಕಿ ಅಂಶಗಳಿಗೋಸ್ಕರ ಸುಳ್ಳು ಪ್ರಕರಣವನ್ನು ದಾಖಲು ಮಾಡಿದ್ದೇವೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**